4) ಕರ್ನಾಟಕ ಸ್ಟಾಂಪು (ಎರಡನೇ ತಿದ್ದುಪಡಿ) ವಿಧೇಯಕ, 2010 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಜಿ.ಕರುಣಾಕರ ರೆಡ್ಡಿ (ಕಂದಾಯ ಸಚಿವರು) : ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ಸ್ಟಾಂಪು (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2010ರ ಕರ್ನಾಟಕ ಸ್ಟಾಂಪು (ಎರಡನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಜಿ.ಕರುಣಾಕರ ರೆಡ್ಡಿ (ಕಂದಾಯ ಸಚಿವರು) : ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ಸ್ಟಾಂಪು (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕ ಮಂಡಿಸಲಾಗಿದೆ. ಅನುಬಂಧ – IV

5) ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕ, 2010 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) (ಶ್ರೀ ಆರ್.ಅಶೋಕ್ (ಸಾರಿಗೆ ಸಚಿವರ ಪರವಾಗಿ) : ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2010ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) (ಶ್ರೀ ಆರ್.ಅಶೋಕ್ (ಸಾರಿಗೆ ಸಚಿವರ ಪರವಾಗಿ) : ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕ ಮಂಡಿಸಲಾಗಿದೆ. ಅನುಬಂಧ– V

(ಆ) ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1) ಕರ್ನಾಟಕ ಧನ ವಿನಿಯೋಗ (ಲೇಖಾನುದಾನ) ವಿಧೇಯಕ, 2010

ಪರ್ಯಾಲೋಚನಾ ಪ್ರಸ್ತಾಪ

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ಧನ ವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವ ಮಂಡಿಸಲಾಯಿತು

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2010ರ ಕರ್ನಾಟಕ ಧನ ವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 3 ರವರೆಗೆ

ಅಧ್ಯಕ್ಷರು : ಖಂಡ 2 ರಿಂದ 3 ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 3ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)